**ಅಸಲು ದಾವಾ ಸಂಖ್ಯೆ- 45/2015 ಪಿ.ಡಬ್ಲ್ಯೂ:- 1**

ದಿನಾಂಕಃ **06-07-2022** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು:- ಪ್ರತಿವಾದಿ 1 ರಿಂದ 3 ರ ಪರ ವಕೀಲರಿಂದ:-**

ನಾನು ದಾವೆಯನ್ನು ಪ್ರಾರಂಭದಲ್ಲಿ ಒಂದು ಸ್ವತ್ತಿಗೆ ಸಂಬಂಧಿಸಿದಂತೆ ದಾಖಲು ಮಾಡಿದ್ದೆನು. ದಾವೆಯನ್ನು ಸಲ್ಲಿಸಲು ವಕೀಲರಿಗೆ ಮಾಹಿತಿಯನ್ನು ನಾನು ನೀಡಿರುತ್ತೇನೆ. ನನ್ನ ತಾತನ ಹೆಸರಿನಲ್ಲಿ ಯಾವುದೇ ಆಸ್ತಿಗಳು ಇರಲಿಲ್ಲ. ಸರ್ವೆ ನಂ. 7/4 ನ್ನು ಹೊರತುಪಡಿಸಿ ನಮ್ಮ ಕುಟುಂಬಕ್ಕೆ ಯಾವುದೇ ಆಸ್ತಿಗಳು ಇರಲಿಲ್ಲ. ದಾವೆಯನ್ನು ದಾಖಲಿಸುವವರೆಗೂ ವಾದಿ ಮತ್ತು ಪ್ರತಿವಾದಿಗಳು ಒಟ್ಟು ಕುಟುಂಬದಲ್ಲಿ ವಾಸವಾಗಿದ್ದರು. ಆ ಬಗ್ಗೆ ಯಾವುದೇ ದಾಖಲೆಗಳು ಇಲ್ಲ. ದಾವೆಯನ್ನು ಸಲ್ಲಿಸುವ ಸಂದರ್ಭದಲ್ಲಿ ವಾದಿ, 1 ಮತ್ತು 4 ನೇ ಪ್ರತಿವಾದಿಗಳು ಒಂದೇ ಮನೆಯಲ್ಲಿ ಒಟ್ಟಿಗೆ ವಾಸವಾಗಿದ್ದರು. ಸದರಿ ಮನೆಗೆ ಸಂಬಂಧಿಸಿದ ದಾಖಲೆಗಳು ನನ್ನ ಬಳಿ ಇರುವುದಿಲ್ಲ. ಒಟ್ಟು ಕುಟುಂಬದ ವ್ಯವಹಾರವನ್ನು ನನ್ನ ಅಜ್ಜಿಯು ತನ್ನ ಜೀವಿತಾಧಿಯವರೆಗೆ ನೋಡಿಕೊಂಡಿದ್ದು, ಅವರು ಮೃತರಾದ ಬಳಿಕ 1 ನೇ ಪ್ರತಿವಾದಿಯು ಒಟ್ಟು ಕುಟುಂಬದ ವ್ಯವಹಾರವನ್ನು ನೋಡಿಕೊಂಡಿರುತ್ತಾರೆ. ದಾವಾ ಸ್ವತ್ತುಗಳಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಕಚೇರಿಗಳಿಗೆ 1 ನೇ ಪ್ರತಿವಾದಿಯೇ ಹೋಗಿಬರುತ್ತಿದ್ದರು . ದಾವಾ ಸ್ವತ್ತುಗಳ ಮಂಜೂರಿಗೆ ಸಂಬಂಧಿಸಿದಂತೆ ಖರ್ಚುವೆಚ್ಚಗಳನ್ನು 1 ನೇ ಪ್ರತಿವಾದಿಯೇ ಭರಿಸಿರುತ್ತಾರೆ ಎಂದರೆ ಸರಿ. ದಾವಾ ಅನುಸೂಚಿ 1 ನೇ ಸ್ವತ್ತಿಗೆ ಸಂಬಂಧಿಸಿದಂತೆ ಕರಯ ಪತ್ರವು 1 ನೇ ಪ್ರತಿವಾದಿ ಮತ್ತು ನನ್ನ ಅಜ್ಜಿಯಾದ ಶೇಷಮ್ಮ ರವರ ಹೆಸರಿನಲ್ಲಿ ಜಂಟಿಯಾಗಿ ಇದೆ ಎಂದರೆ ಸರಿ . ನನ್ನ ಅಜ್ಜಿಯು ಮೃತರಾದ ಬಳಿಕ ಪಹಣಿ ಪತ್ರಿಕೆಯು 1 ನೇ ಪ್ರತಿವಾದಿಯ ಹೆಸರಿಗೆ ದಾಖಲಾಗಿರುತ್ತದೆ ಎಂದರೆ ಸಾಕ್ಷಿಯು ಯಾರಿಗೂ ತಿಳಿಯದ ಹಾಗೆ 1 ನೇ ಪ್ರತಿವಾದಿಯು ತನ್ನ ಹೆಸರಿಗೆ

ಮಾಡಿಸಿಕೊಂಡಿರುತ್ತಾರೆ ಎಂದು ಉತ್ತರಿಸಿರುತ್ತಾರೆ. ದಾವಾ ಸ್ವತ್ತುಗಳನ್ನು ವಾದಿ ಮತ್ತು ಪ್ರತಿವಾದಿಗಳು ಒಟ್ಟಿಗೆ ಸಾಗುವಳಿ ಮಾಡುತ್ತಿದ್ದಾರೆ ಎಂದರೆ ಸರಿ. ದಾವಾ ಸ್ವತ್ತುಗಳಲ್ಲಿ ವಾದಿ ಮತ್ತು ಪ್ರತಿವಾದಿಗಳಿಗೆ ಸಮನಾದ ಹಕ್ಕು ಇದೆ ಎಂದರೆ ಸರಿ. ನನ್ನ ತಾಯಿಗೆ 4 ಜನ ಮಕ್ಕಳು. 1 ನೇ ಪ್ರತಿವಾದಿ ದಾವಾ ಅನುಸೂಚಿ 1 ನೇ ಸ್ವತ್ತನ್ನು 2 ಮತ್ತು 3 ನೇ ಪ್ರತಿವಾದಿಗಳ ನಡುವೆ ಹಂಚಿಕೆ ಮಾಡಿದ್ದಾರೆ ಎಂದರೆ ಸರಿ . ದಾವಾ 1 ನೇ ಅನುಸೂಚಿಯ ಮೇಲೆ ಪ್ರತಿವಾದಿ 2 ಮತ್ತು 3 ರವರು ನನ್ನ ತಾಯಿ ಮತ್ತು 4 ನೇ ಪ್ರತಿವಾದಿಯ ವಿರುದ್ಧ ಶಾಶ್ವತ ನಿರ್ಬಂಧಕಾಜ್ಞೆ ಆದೇಶ ಕೋರಿ ಅಸಲು ದಾವಾ ಸಂ 46/15 ನ್ನು ದಾಖಲಿಸಿರುತ್ತಾರೆ ಎಂದರೆ ಸರಿ . ಸದರಿ ದಾವೆಯು ಇತ್ಯರ್ಥಕ್ಕಾಗಿ ಬಾಕಿ ಇದೆ ಎಂದರೆ ಸರಿ.

**ಮುಂದುವರೆದ ಪಾಟೀ ಸವಾಲನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.**

**ಓ. ಹೇ. ಕೇ. ಸ. ಇದೆ.**

**ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಹೊನ್ನಾಳಿ.**